ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಗುರುವಾರ, ದಿನಾಂಕ : 10 ನೇ ಡಿಸೆಂಬರ್, 2020

ಕೋಲಾರ ತಾಲ್ಲೂಕಿನ ಅಂತರಗಂಗೆ ಬೆಟ್ಟವನ್ನು ಪ್ರವಾಸಿ ತಾಣವನ್ನಾಗಿ ಸರ್ಕಾರ ಘೋಷಿಸಿರುವ ಬಗ್ಗೆ

ಶ್ರೀ ಗೋವಿಂದ ರಾಜು(ವಿಧಾನಸಭೆಯಿಂದ ಚುನಾಯಿತರಾದವರು) –

294 (335) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕೋಲಾರ ತಾಲ್ಲೂಕಿನ ಅಂತರಗಂಗೆ ಬೆಟ್ಟವನ್ನು ಪ್ರವಾಸಿತಾಣವೆಂದು ಸರ್ಕಾರ ಘೋಷಿಸಿರುವುದು ನಿಜವೇ; ಹಾಗಿದ್ದಲ್ಲಿ ಇಲ್ಲಿಗೆ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಒದಗಿಸಲಾಗಿದೆಯೇ;

(ಆ) ಕೋಲಾರದಿಂದ ಅಂತರಗಂಗೆ ಬೆಟ್ಟಕ್ಕೆ ರಸ್ತೆ ನಿರ್ಮಿಸಲು ಜಿಲ್ಲಾಡಳಿತವು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದೆಯೇ; (ಪ್ರಸ್ತಾವನೆಯ ಪ್ರತಿ ನೀಡುವುದು)

(ಇ) ಕೋಲಾರದಿಂದ ಅಂತರಗಂಗೆ ಬೆಟ್ಟಕ್ಕೆ ರಸ್ತೆ ನಿರ್ಮಿಸಲು ಸರ್ಕಾರ ಅನುದಾನವನ್ನು ಬಿಡುಗಡೆ ಮಾಡಿದ್ದು ನಿಜವೇ;

(ಈ) ಬಿಡುಗಡೆ ಮಾಡಿದ್ದ ಅನುದಾನವನ್ನು ಸರ್ಕಾರ ಹಿಂಪಡೆದಿರುವುದು ನಿಜವೇ; ಬಿಡುಗಡೆಯಾಗಿದ್ದ ಅನುದಾನವನ್ನು ಹಿಂಪಡೆಯಲು ಕಾರಣಗಳೇನು; ಅನುದಾನವನ್ನು ಹಿಂಪಡೆದಿರುವುದರಿಂದ ಇದರಿಂದಾಗಿ ಪ್ರವಾಸಿಗರಿಗೆ ಹೋಗಿ-ಬರಲು ತುಂಬಾ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಹಾಗಿದ್ದಲ್ಲಿ, ಈ ತೊಂದರೆಯನ್ನು ನಿವಾರಿಸಲು ಸರ್ಕಾರ ಪ್ರಸಕ್ತ ಸಾಲಿನಲ್ಲಿಯೇ ಅನುದಾನವನ್ನು ಬಿಡುಗಡೆ ಮಾಡಿ ರಸ್ತೆ ನಿರ್ಮಾಣ ಕಾಮಗಾರಿಯನ್ನು ಕೈಗೆತ್ತಿಕೊಳ್ಳುವುದೇ?